ದಿನಾಂಕ 04.10.2023 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

17 ಪಹಣಿಗಳ ಆನ್‌ಲೈನ್ ಪ್ರತಿಗಳನ್ನು ಕ್ರಮವಾಗಿ ನಿಪಿ-1 ರಿಂದ ನಿಪಿ-17, ದಿನಾಂಕ 15.12.2021 ರ ಹಿಂಬರಹವನ್ನು ನಿಪಿ-18, ದಿನಾಂಕ 18.08.2021 ರ 6 ಕ್ರಯಪತ್ರಗಳ ಆನ್‌ಲೈನ್ ಪ್ರತಿಗಳನ್ನು ಕ್ರಮವಾಗಿ ನಿಪಿ-19 ರಿಂದ ನಿಪಿ-24, 9 ಪುಟಗಳ ಋಣಭಾರ ಪ್ರಮಾಣಪತ್ರವನ್ನು ನಿಪಿ-25 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

**(ಸರಸ್ವತಿ ಕೆ.ಎನ್.)**
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.